# ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ಕಾರ್ಯಾಲಯ, ನಂಜನಗೂಡು

**ಸಿ.ಸಿ. ನಂ.462-2020** **ಪಿ .ಡಬ್ಲುಃ 1**

| | |
|---|---|
| ಸಾಕ್ಷಿದಾರರ ಹೆಸರು<br>ತಂದೆ/ ಗಂಡನ ಹೆಸರು<br>ವಯಸ್ಸು<br>ಉದ್ಯೋಗ<br>ವಾಸ್ತವ್ಯ | ಸಲೀಂ ಅಹಮದ್<br>ಲೇ.ಜಕ್ರೀಯ ಷರೀಫ್<br>43 ವರ್ಷ<br>ಹಣ್ಣು ಮತ್ತು ತರಕಾರಿ ವ್ಯಾಪಾರ<br>ನಂಜನಗೂಡು |
| | **ಸತ್ಯ ಪ್ರತಿಜ್ಞೆಯ** ಮೇರೆಗೆ **ದಿನಾಂಕ** 20-02-2023. |

**ಮುಖ್ಯ ವಿಚಾರಣೆಃ ಶ್ರೀ ಹೆಚ್.ಪಿ.ಎನ್ ವಕೀಲರಿಂದಃ**

**ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು ಅದರಲ್ಲಿ ಬರೆದ ವಿಷಯ ಸತ್ಯದಿಂದ ಕೂಡಿದ್ದು ಅದನ್ನು ನಾನೇ ಹೇಳಿ ಬರೆಯಿಸಿ ಸಹಿ ಮಾಡಿರುತ್ತೇನೆ.**

ಆರೋಪಿ ನನಗೆ ನೀಡಿದ ಚೆಕ್ ನಂ.645842 ನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು, ಅದರ ಮೇಲಿರುವ ಆರೋಪಿಯ ಸಹಿಯನ್ನು ಸಾಕ್ಷಿಯು ನೋಡಿ ಗುರುತಿಸಿದ್ದು ಅದನ್ನು ನಿಪಿ-1(ಎ) ಎಂದು, ಹಿಂಬರಹವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು, ದಿ.16-06-2020 ರಂದು ನನ್ನ ವಕೀಲರ ಮೂಲಕ ಆರೋಪಿಗೆ ಕಳುಹಿಸಿದ ನೋಟಿಸ್‌ನ ಕಛೇರಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು, ಅಂಚೆ ರಶೀದಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-4 ಎಂದು, ತೆರೆಯದೇ ಇರುವ ಅಂಚೆ ಲಕೋಟೆಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-5 ಎಂದು, ಅದನ್ನು ತೆರೆದು ನೋಡಲಾಗಿ ಅದರಲ್ಲಿನ ತಿಳುವಳಿಕೆಯನ್ನು ನಿಪಿ-5(ಎ) ಎಂದು ಗುರುತಿಸಲಾಯಿತು. ಆದುದರಿಂದ ನಾನು

ಪಿರ್ಯಾದಿನಲ್ಲಿ ಕೋರಿರುವಂತೆ ಆರೋಪಿ ವಿರುದ್ಧ ಸೂಕ್ತ ಆದೇಶ ಮಾಡಬೇಕೆಂದು ಪಾರ್ಥಿಸಿಕೊಳ್ಳುತ್ತೇನೆ.

ಪಾಟೀ ಸವಾಲಿಗೆ ಆರೋಪಿ ಪರ ವಕೀಲರು ಸಮಯವಕಾಶ ಕೋರಿದ್ದು, ಸಮಯವಕಾಶ ನೀಡಲಾಯಿತು.

**(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

**ಓ . ಹೇ. ಕೇ. ಸರಿ. ಇದೆ**

**ಸಹಿ/-**

**2 ನೇ ಕಿ.ಪ್ರ.ದ. ನ್ಯಾ ದಂ. ನಂಜನಗೂಡು**